## ಅಗ್ನಿಶಾಮಕ, ಅಗ್ನಿಶಾಮಕ ಚಾಲಕ ಹಾಗೂ ಚಾಲಕ ತಂತ್ರಜ್ಞ ನೇಮಕಾತಿ–2020

**ಹುದ್ದೆಗಳಿಗೆ ಸಂಬಂಧಿಸಿದಂತೆ ಅಂತರ್ಜಾಲದ ಮುಖಾಂತರ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಪದೇ ಪದೇ ಕೇಳಬಹುದಾದ ಪ್ರಶ್ನೆಗಳು**

1. ನಿಗದಿಪಡಿಸಲಾಗಿರುವ ಕನಿಷ್ಠ ವಯೋಮಿತಿ ?.

**ಉ:** ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ 2013 ರ ಪ್ರಕಾರ ಅಗ್ನಿಶಾಮಕ, ಅಗ್ನಿಶಾಮಕ ಚಾಲಕ, ಚಾಲಕ ತಂತ್ರಜ್ಞ ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ 20.07.2020ಕ್ಕೆ ಕನಿಷ್ಠ 18 ವರ್ಷ ತುಂಬಿರಬೇಕು.

2. ನಿಗಧಿಪಡಿಸಲಾದ ಗರಿಷ್ಠ ವಯೋಮಿತಿ ?.

ಉ: ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮ 2013 ರ ಪ್ರಕಾರ ಅಗ್ನಿಶಾಮಕ, ಅಗ್ನಿಶಾಮಕ ಚಾಲಕ, ಚಾಲಕ ತಂತ್ರಜ್ಞ ಹುದ್ದೆಗೆ ವಯೋಮಿತಿಯು ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಲಾಗಿರುವ ಕೊನೆಯ ದಿನಾಂಕಕ್ಕೆ ಅಂದರೆ 20.07.2020ಕ್ಕೆ ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 26 ವರ್ಷ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಗರಿಷ್ಠ 28 ವರ್ಷ ಮೀರಿರಬಾರದು.

3. ಮಾಜಿ ಸೈನಿಕರಿಗೆ ನಿಗಧಿಪಡಿಸಲಾದ ವಯೋಮಿತಿ ?.

ಉ: ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಸೇನೆಯಲ್ಲಿ ಸೇವೆ ಸಲ್ಲಿಸಿದ ಅವಧಿಯ ಜೊತೆಗೆ ಹೆಚ್ಚುವರಿ ಮೂರು(3) ವರ್ಷಗಳ ವಿನಾಯಿತಿಯನ್ನು ನೀಡಲಾಗುವುದು.

4. ಅಗ್ನಿಶಾಮಕ, ಅಗ್ನಿಶಾಮಕ ಚಾಲಕ, ಚಾಲಕ ತಂತ್ರಜ್ಞ ಹುದ್ದೆಗಳಿಗೆ ಯಾವ ವಿಧ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ.?.

**ಉ:** **ಅಗ್ನಿಶಾಮಕರಿಗೆ:–**

ಎಸ್.ಎಸ್.ಎಲ್.ಸಿ / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ ಅಂದರೆ 20.07.2020ಕ್ಕೆ ಹೊಂದಿರಬೇಕು ಹಾಗೂ ಈ ಪರೀಕ್ಷೆಯಲ್ಲಿ ಕನ್ನಡವು ಒಂದು ಪತ್ರ ವಿಷಯವಾಗಿದ್ದಿರಬೇಕು.

**ಅಗ್ನಿಶಾಮಕ ಚಾಲಕರಿಗೆ:–**

ಎಸ್.ಎಸ್.ಎಲ್.ಸಿ / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ ಅಂದರೆ 20.07.2020ಕ್ಕೆ ಹೊಂದಿರಬೇಕು ಹಾಗೂ ಈ ಪರೀಕ್ಷೆಯಲ್ಲಿ ಕನ್ನಡವು ಒಂದು ಪತ್ರ ವಿಷಯವಾಗಿದ್ದಿರಬೇಕು ಹಾಗೂ ಭಾರೀ ವಾಹನ ಚಾಲನಾ ಪರವಾನಗಿ ಹೊಂದಿರಬೇಕು.

**ಚಾಲಕ ತಂತ್ರಜ್ಞರಿಗೆ:–**

ಎಸ್.ಎಸ್.ಎಲ್.ಸಿ / 10ನೇ ತರಗತಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಅಂದರೆ 20.07.2020ಕ್ಕೆ ಹೊಂದಿರಬೇಕು ಹಾಗೂ ಈ ಪರೀಕ್ಷೆಯಲ್ಲಿ ಕನ್ನಡವು ಒಂದು ಪತ್ರ ವಿಷಯವಾಗಿದ್ದಿರಬೇಕು ಹಾಗೂ ಭಾರೀ ವಾಹನ ಚಾಲನಾ ಪರವಾನಗಿ ಹೊಂದಿರಬೇಕು ಮತ್ತು ಸರ್ಕಾರದಿಂದ ಅಂಗೀಕೃತಗೊಂಡ ITI ನಿಂದ ಆಟೋಮೋಬೈಲ್ (AutoMobile) ಟ್ರೇಡ್ ಸರ್ಟಿಫಿಕೇಟ್ ಹೊಂದಿರಬೇಕು. ಅಂದರೆ, The list of recognized trades under Auto Mobiles in the ITI syllabus are , 1) Mechanic (Diesel), 2) Mechanic (Motor Vehicle), 3) Mechanic (Tractor), 4) Mechanic Repair & Maintenance of light vehicle & 5) Driver cum Mechanic.

(ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ದಿನಾಂಕ:20.07.2020 ರೊಳಗೆ ಹೊಂದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಮಾತ್ರ ಪರಿಗಣಿಸಲಾಗುವುದು)

3) ಅರ್ಜಿ ಮಾರಾಟವಾಗುತ್ತಿರುವ ಬಗ್ಗೆ ಹೇಗೆ ತಿಳಿದುಕೊಳ್ಳಬಹುದು?.

**ಉ:** ಅರ್ಜಿ ಮಾರಾಟ ಮಾಡಲಾಗುವುದಿಲ್ಲ. ಆಂಗ್ಲ/ ಕನ್ನಡ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರವನ್ನು ನೀಡುವುದಲ್ಲದೆ ದೂರದರ್ಶನ ಮತ್ತು ಆಕಾಶವಾಣಿಗಳಲ್ಲಿ ಪ್ರಸಾರ ಮಾಡಲಾಗುವುದು. ಕಛೇರಿಯ ಅಧಿಕೃತ ವೆಬ್–ಸೈಟ್ www.ksp.gov.in ನಲ್ಲಿ ನೀಡಲಾಗುವ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕಾಗುತ್ತದೆ.

ಅಭ್ಯರ್ಥಿಗಳು ಆನ್–ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಲಭ್ಯವಿರುವ ಖಾಲಿ ಹುದ್ದೆಗಳೆಷ್ಟು?.

**ಉ:** **ಉಳಿದ ಮೂಲ ವೃಂದದ ವಿವರ:**

- **ಅಗ್ನಿಶಾಮಕ ಠಾಣಾಧಿಕಾರಿ = 26 =26 ಹುದ್ದೆಗಳು**
- ಅಗ್ನಿಶಾಮಕರು = 660+323=983 ಹುದ್ದೆಗಳು
- ಅಗ್ನಿಶಾಮಕ ಚಾಲಕರು = 176+23=199 ಹುದ್ದೆಗಳು
- ಚಾಲಕ ತಂತ್ರಜ್ಞರು = 47+15=62 ಹುದ್ದೆಗಳು

**ಒಟ್ಟು = 883+387=1270 ಹುದ್ದೆಗಳು**

**ಕಲ್ಯಾಣ-ಕರ್ನಾಟಕ ವೃಂದದ ವಿವರ:**

- ಅಗ್ನಿಶಾಮಕರು ಠಾಣಾಧಿಕಾರಿ = 5+ 5 = 10
- ಅಗ್ನಿಶಾಮಕರು = 76+163 =239 ಹುದ್ದೆಗಳು
- ಅಗ್ನಿಶಾಮಕ ಚಾಲಕರು = 5+ 23 = 28 ಹುದ್ದೆಗಳು
- ಚಾಲಕ ತಂತ್ರಜ್ಞರು = 13+ 7 = 20 ಹುದ್ದೆಗಳು

---

**ಒಟ್ಟು =104+193 =297 ಹುದ್ದೆಗಳು**

---

4) ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಲು ಎಷ್ಟು ಶುಲ್ಕವನ್ನು ಪಾವತಿಸಬೇಕು ?.

**ಉ:** ಎಸ್.ಸಿ, ಎಸ್.ಟಿ, ಪ್ರವರ್ಗ-01 ರ ಅಭ್ಯರ್ಥಿಗಳಿಗೆ ರೂ-100/- ಮತ್ತು ಸಾಮಾನ್ಯ ಅಭ್ಯರ್ಥಿಗಳು, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ರೂ-250/- ಪಾವತಿಸಿ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ.

5) ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಿ ಸಲ್ಲಿಸಬೇಕಾಗುತ್ತದೆ. ?.

**ಉ:** ಅಭ್ಯರ್ಥಿಯು ಆನ್-ಲೈನ್ www.ksp.gov.in ಮುಖಾಂತರ ಭರ್ತಿ ಮಾಡಿದ ಅರ್ಜಿಗಳನ್ನು ನಿಗಧಿಪಡಿಸಿದ ಕೊನೆಯ ದಿನಾಂಕ: 20.07.2020 ರಂದು ಸಂಜೆ 06.00 ಗಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ.

6) ಅರ್ಜಿಗಳನ್ನು ಜೆರಾಕ್ಸ್ ಮಾಡಿ ಅಥವಾ ಅರ್ಜಿಗಳನ್ನು ಟೈಪ್ ಮಾಡಿ ಪ್ರತಿಗಳನ್ನು ಸಲ್ಲಿಸಬಹುದೇ ?.

**ಉ:** ಇಲ್ಲ, ಇಲಾಖೆಯು ನಿಗಧಿಪಡಿಸಿರುವ ಮೂಲ ಅರ್ಜಿಯನ್ನು ಆನ್-ಲೈನ್ ಮುಖಾಂತರ ಸಲ್ಲಿಸಬೇಕಾಗಿರುತ್ತದೆ. ಆನ್-ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಜೆರಾಕ್ಸ್ ಮಾಡಿದ, ಟೈಪ್ ಮಾಡಿದ ಅಥವಾ ಖುದ್ದಾಗಿ ಮತ್ತು ಅಂಚೆ ಮುಖಾಂತರ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

10 (ಎ) ಯಾವ ರೀತಿಯಲ್ಲಿ ಶುಲ್ಕವನ್ನು ಪಾವತಿಸಬೇಕು?

**ಉ:** ಆನ್-ಲೈನ್ ಮೂಲಕ ಸೃಜಿಸಿರುವ ಚಲನ್‌ಅನ್ನು ಪ್ರಿಂಟ್ ತೆಗೆದು ಅಧಿಕೃತ ಹೆಚ್.ಡಿ.ಎಫ್.ಸಿ ಬ್ಯಾಂಕ್ ಅಥವಾ ಅಂಚೆ ಕಚೇರಿ ಶಾಖೆಗಳಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ, ಬೇರಾವುದೇ ಬ್ಯಾಂಕಿನಲ್ಲಿ ಪಾವತಿಸಲು ಅವಕಾಶವಿರುವುದಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್ ಅಥವಾ ಇನ್ನಾವುದೇ ಸ್ವರೂಪದಲ್ಲಿ ಶುಲ್ಕವನ್ನು ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

10 (ಬಿ) ಆನ್-ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯಲ್ಲಿನ ಅಂಶಗಳನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಬಹುದೇ?

**ಉ:** ಅಭ್ಯರ್ಥಿಗಳು ಒಮ್ಮೆ ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನೀಡಿರುವ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

10 (ಸಿ) ಒಮ್ಮೆ ಪಾವತಿಸಿದ ಶುಲ್ಕವನ್ನು ಹಿಂಪಡೆಯಬುದೇ?

**ಉ:** ಒಮ್ಮೆ ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸಿ, ಸೃಜಿಸಿರುವ ಚಲನ್‌ನಿಂದ ಸಂಬಂಧಪಟ್ಟ ಬ್ಯಾಂಕಿನಲ್ಲಿ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಕಾರಣಗಳಿಂದ ಶುಲ್ಕವನ್ನು ಹಿಂದಿರುಗಿಸುವುದಿಲ್ಲ.

10 (ಡಿ):ಆನ್-ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳ ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದೇ?

**ಉ:** ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಮತ್ತು ಪಾವತಿಸಿದ ಶುಲ್ಕವನ್ನು ಪರಿಗಣಿಸಲಾಗುವುದಿಲ್ಲ.

10(ಇ) ಮೀಸಲಾತಿ ಅಡಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ತಪ್ಪಾಗಿ ಪ್ರವರ್ಗವನ್ನು ತುಂಬಿರುವ ಅರ್ಜಿಗಳನ್ನು ಯಾವ ರೀತಿಯಲ್ಲಿ ಪರಿಗಣಿಸಲಾಗುವುದು?

**ಉ:** ಅಭ್ಯರ್ಥಿಯು ಅರ್ಜಿಯ ಪ್ರವರ್ಗದ ಅಂಕಣವಾಗಿ ತಪ್ಪಾಗಿ ನಮೂದಿಸಿದ್ದಲ್ಲಿ ಅದರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅಭ್ಯರ್ಥಿಗಳು ಅರ್ಹತೆ ಹೊಂದಿದಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

10(ಎಫ್)ಮೀಸಲಾತಿಯ ಅಡಿಯಲ್ಲಿ ಆಯ್ಕೆ ಬಯಸಿರುವ ಅಭ್ಯರ್ಥಿಗಳು ಯಾವ ದಿನಾಂಕದ ಪ್ರಮಾಣ ಪತ್ರಗಳನ್ನು ಯಾವ ನಮೂನೆಯಲ್ಲಿ ಪಡೆದಿಟ್ಟುಕೊಂಡಿರಬೇಕು?

**ಉ:** ಮೀಸಲಾತಿಯ ಅಡಿಯಲ್ಲಿ ಆಯ್ಕೆಯನ್ನು ಬಯಸುವ ಅಭ್ಯರ್ಥಿಗಳು ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗಧಿ ಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಅಧಿಸೂಚನೆಯಲ್ಲಿ ನಮೂದಿಸಿರುವ ನಿಯಮಗಳ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು.

10 (ಜಿ) ಆನ್–ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷ ಉಂಟಾದಲ್ಲಿ ಯಾರನ್ನು ಸಂಪರ್ಕಿಸಬೇಕು?

**ಉ:** ಆನ್–ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆಗಳು ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ:080–22943346 ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿ ಸಲ್ಲಿಸಬಹುದಾಗಿದೆ.

11) ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಹುದೇ?

**ಉ:** ಇಲ್ಲ. ಒಬ್ಬ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಬಾರದು. ಹಾಗೆ ಸಲ್ಲಿಸಿದಲ್ಲಿ, ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಿ, ಉಳಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

11) ನಾನು ಅರ್ಹನಿರುವ ಬಗ್ಗೆ ಹೇಗೆ ತಿಳಿದುಕೊಳ್ಳುವುದು?

**ಉ:** ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ನೀವು ಅರ್ಹರಿರುವ ಬಗ್ಗೆ ಗಣಕಯಂತ್ರವೇ ತಿಳಿಸುತ್ತದೆ. ಅನರ್ಹನಾಗಿದ್ದರೆ ಅರ್ಜಿಯನ್ನು ಸಲ್ಲಿಸಲು ಸಾಧ್ಯವಾಗುವುದಿಲ್ಲ.

12) ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆ ಪತ್ರವನ್ನು ಹೇಗೆ ಪಡೆಯಬೇಕು?

**ಉ:** ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆಪತ್ರವನ್ನು ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ ಪ್ರತ್ಯೇಕವಾಗಿ ಕರೆ ಪತ್ರವನ್ನು ಕಳುಹಿಸಲಾಗುವುದಿಲ್ಲ.

13) ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಎಂದರೇನು?

**ಉ:** ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಈ ಕೆಳಕಂಡ ಅಂಶಗಳಿರುತ್ತವೆ.

ಅಗ್ನಿಶಾಮಕ, ಅಗ್ನಿಶಾಮಕ ಚಾಲಕ ಹಾಗೂ ಚಾಲಕ ತಂತ್ರಜ್ಞರು ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಈ ಕೆಳಕಂಡ ಪರೀಕ್ಷೆಯನ್ನು ನಡೆಸಲಾಗುವುದು:

**ಅಪೆಂಡಿಕ್ಸ್(ಎ) ದೇಹದಾರ್ಢ್ಯತೆ ಪರೀಕ್ಷೆ**

| | | |
|---|---|---|
| 1 | ಎತ್ತರ | ಕನಿಷ್ಠ 168 ಸೆಂ.ಮೀ. |
| 2 | ಎದೆ ಸುತ್ತಳತೆ | ಕನಿಷ್ಠ 81 ಸೆಂ.ಮೀ ವಿಸ್ತಾರಗೊಂಡ ನಂತರ ಕನಿಷ್ಠ 5 ಸೆಂ.ಮೀ ಅಂದರೆ 86 ಸೆಂ.ಮೀ ಗೆ ಕಡಿಮೆ ಇಲ್ಲದಂತೆ. |
| 3 | ತೂಕ | ಕನಿಷ್ಠ 50 ಕೆ.ಜಿ. |
| 4 | ಅನರ್ಹತೆಗಳು | ಬಾಗಿದ ಕಾಲು, ತಾಗು ಮಂಡಿ, ಚಪ್ಪಟೆ ಪಾದ ಹೊಂದಿದ ಅಭ್ಯರ್ಥಿಗಳು ಅನರ್ಹರಾಗುವರು. |

ಅಪೆಂಡಿಕ್ಸ್ (ಎ)ನಲ್ಲಿ ನಿಗದಿಪಡಿಸಿದಂತೆ ದೇಹದಾರ್ಢ್ಯತೆ ಪರೀಕ್ಷೆಯನ್ನು ನಡೆಸಲಾಗುವುದು. ವೃಂದ ಮತ್ತು ನೇಮಕಾತಿ ನಿಯಮ 2013 ರ ಅನ್ವಯ SSLC (**10 ನೇ ತರಗತಿ** ) ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಶೇಕಡಾ **1:5** ರ ಅನುಪಾತದಲ್ಲಿ ಎಲ್ಲಾ ಹುದ್ದೆಗಳ ದೇಹದಾರ್ಢ್ಯತೆ ಪರೀಕ್ಷೆಗೆ ಕರೆಯಲಾಗುವುದು.

14) **ದೈಹಿಕ ಸಾಮರ್ಥ್ಯ ಪರೀಕ್ಷೆ: (Physical Efficiency Test):**

ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹಗೊಳ್ಳುವ ಅಭ್ಯರ್ಥಿಗಳಿಗೆ ಮಾತ್ರ ಈ ಕೆಳಕಂಡ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು.

**ಅಗ್ನಿಶಾಮಕರಿಗೆ**

| **ಅಂಶಗಳು** | **ಅರ್ಹತಾ ವೇಳೆ/ದೂರ** | |
|---|---|---|
| | **ಸಾಮಾನ್ಯ ಅಭ್ಯರ್ಥಿಗಳಿಗೆ** | **ಮಾಜಿ ಸೈನಿಕ ಅಭ್ಯರ್ಥಿಗಳಿಗೆ** |
| 100 ಮೀಟರ್ ಓಟ | 15 ಸೆಕೆಂಡ್‌ಗಳಲ್ಲಿ | 20 ಸೆಕೆಂಡ್‌ಗಳಲ್ಲಿ |
| 100 ಮೀಟರ್ ಓಟ ಬೆನ್ನಿನಲ್ಲಿ 22 ಕೆ.ಜಿ ಭಾರದೊಂದಿಗೆ | 25 ಸೆಕೆಂಡ್‌ಗಳಲ್ಲಿ | 32 ಸೆಕೆಂಡ್‌ಗಳಲ್ಲಿ |
| 22 ಕೆ.ಜಿ ಭಾರವನ್ನು ಬೆನ್ನಿನಲ್ಲಿ ಹೊತ್ತು 20 ಅಡಿ ಎತ್ತರದ ವರೆಗೆ ಏಣಿ ಹತ್ತುವುದು. | 20 ಸೆಕೆಂಡ್‌ಗಳಲ್ಲಿ | 25 ಸೆಕೆಂಡ್‌ಗಳಲ್ಲಿ |
| ಗುಂಡು ಎಸೆತ(7.26 ಕಿಲೋ) (ಸಾಮಾನ್ಯ ಅಭ್ಯರ್ಥಿಗಳಿಗೆ) | ಕನಿಷ್ಠ 5.60 ಮೀಟರ್, ಮೂರು ಪ್ರಯತ್ನಗಳಲ್ಲಿ | |
| ಗುಂಡು ಎಸೆತ(4 ಕಿಲೋ) (ಮಾಜಿ ಸೈನಿಕ ಅಭ್ಯರ್ಥಿಗಳಿಗೆ) | | ಕನಿಷ್ಟ 3.75 ಮೀಟರ್, ಮೂರು ಪ್ರಯತ್ನಗಳಲ್ಲಿ |
| 800 ಮೀಟರ್ ಓಟ (ಸಾಮಾನ್ಯ ಅಭ್ಯರ್ಥಿಗಳಿಗೆ) | 2 ನಿಮಿಷ 50 ಸೆಕೆಂಡಗಳಲ್ಲಿ | |
| 400 ಮೀಟರ್ ಓಟ (ಮಾಜಿ ಸೈನಿಕ ಅಭ್ಯರ್ಥಿಗಳಿಗೆ) | | 2 ನಿಮಿಷ 50 ಸೆಕೆಂಡ್‌ಗಳಲ್ಲಿ |

**ಟಿಪ್ಪಣಿ:**

1) ಅಭ್ಯರ್ಥಿಗಳು ಅರ್ಹಗೊಳ್ಳಲು ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಠ 3 ರಲ್ಲಿ ಉತ್ತೀರ್ಣರಾಗಬೇಕು. ಪ್ರತಿಯೊಂದು ದೈಹಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದರೆ 20 ಅಂಕಗಳನ್ನು ನೀಡಲಾಗುವುದು. ಅದರಂತೆ 3, 4 ಹಾಗೂ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾಗುವ ಅಭ್ಯರ್ಥಿಗಳಿಗೆ ಅನುಕ್ರಮವಾಗಿ 60, 80 ಹಾಗೂ 100 ಅಂಕಗಳನ್ನು ನೀಡಲಾಗುವುದು. ದೈಹಿಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಹಾಗೂ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಡೆದ ಅಂಕಗಳ ಜೊತೆ ಸೇರಿಸಿ ಆಯ್ಕೆಯ ಮೆರಿಟ್ ಪಟ್ಟಿಯನ್ನು ತಯಾರಿಸುವಾಗ ಪರಿಗಣಿಸಲಾಗುವುದು.

1) ದೈಹಿಕ ಸಾಮರ್ಥ್ಯ ಪರೀಕ್ಷೆ ಮುಗಿದ ನಂತರ ಸಮಿತಿಯ ಮುಂದೆ ತಮ್ಮ ಸಾಧನೆಯ ಬಗ್ಗೆ ಪ್ರಮಾಣ ಪತ್ರಕ್ಕೆ ಅಭ್ಯರ್ಥಿಯು ಸಹಿ ಹಾಕಲೇಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳು ಅನರ್ಹಗೊತೆಳಗಾಗುವರು.

2) ಅಭ್ಯರ್ಥಿಗಳು ಯಾವುದೇ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಗೈರು ಹಾಜರಾದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು

**ಅಗ್ನಿಶಾಮಕ ಚಾಲಕ ಮತ್ತು ಚಾಲಕ ತಂತ್ರಜ್ಞರಿಗೆ**

| ಅಂಶಗಳು | ಅರ್ಹತಾ ವೇಳೆ/ದೂರ | |
|---|---|---|
| | ಸಾಮಾನ್ಯ ಅಭ್ಯರ್ಥಿಗಳಿಗೆ | ಮಾಜಿ ಸೈನಿಕ ಅಭ್ಯರ್ಥಿಗಳಿಗೆ |
| 100 ಮೀಟರ್ ಓಟ | 15 ಸೆಕೆಂಡ್‌ಗಳಲ್ಲಿ | 20 ಸೆಕೆಂಡ್‌ಗಳಲ್ಲಿ |
| 100 ಮೀಟರ್ ಓಟ ಬೆನ್ನಿನಲ್ಲಿ 22 ಕೆ.ಜಿ ಭಾರದೊಂದಿಗೆ | 25 ಸೆಕೆಂಡ್‌ಗಳಲ್ಲಿ | 32 ಸೆಕೆಂಡ್‌ಗಳಲ್ಲಿ |
| 22 ಕೆ.ಜಿ ಭಾರವನ್ನು ಬೆನ್ನಿನಲ್ಲಿ ಹೊತ್ತು 20 ಅಡಿ ಎತ್ತರದ ವರಗೆ ಏಣಿ ಹತ್ತುವುದು. | 20 ಸೆಕೆಂಡ್‌ಗಳಲ್ಲಿ | 25 ಸೆಕೆಂಡ್‌ಗಳಲ್ಲಿ |
| ಗುಂಡು ಎಸೆತ (7.26 ಕಿಲೋ) (ಸಾಮಾನ್ಯ ಅಭ್ಯರ್ಥಿಗಳಿಗೆ) | ಕನಿಷ್ಟ 5.60 ಮೀಟರ್ ಮೂರು ಪ್ರಯತ್ನದಲ್ಲಿ | |
| ಗುಂಡು ಎಸೆತ(4 ಕಿಲೋ) (ಮಾಜಿ ಸೈನಿಕ ಅಭ್ಯರ್ಥಿಗಳಿಗೆ) | | ಕನಿಷ್ಟ 3.75 ಮೀಟರ್ ಮೂರು ಪ್ರಯತ್ನದಲ್ಲಿ |
| 800 ಮೀಟರ್ ಓಟ (ಸಾಮಾನ್ಯ ಅಭ್ಯರ್ಥಿಗಳಿಗೆ) | 2 ನಿಮಿಷ 50 ಸೆಕೆಂಡಗಳಲ್ಲಿ | |
| 400 ಮೀಟರ್ ಓಟ (ಮಾಜಿ ಸೈನಿಕ ಅಭ್ಯರ್ಥಿಗಳಿಗೆ) | | 2 ನಿಮಿಷ 50 ಸೆಕೆಂಡ್‌ಗಳಲ್ಲಿ |

**ಟಿಪ್ಪಣಿ:**

1) ಅಗ್ನಿಶಾಮಕ ಚಾಲಕ ಮತ್ತು ಚಾಲಕ ತಂತ್ರಜ್ಞ ಅಭ್ಯರ್ಥಿಗಳು ಅರ್ಹಗೊಳ್ಳಲು ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಠ 3 ರಲ್ಲಿ ಉತ್ತೀರ್ಣರಾಗಬೇಕು. ದೈಹಿಕ ಸಾಮರ್ಥ ಪರೀಕ್ಷೆಗೆ ಅಂಕಗಳನ್ನು ನೀಡಲಾಗುವುದಿಲ್ಲ. ಇವು ಕೇವಲ ಅರ್ಹತೆಗೆ ಮಾತ್ರ ಸೀಮಿತವಾಗಿರುತ್ತದೆ.

2) ದೈಹಿಕ ಸಾಮರ್ಥ್ಯ ಪರೀಕ್ಷೆ ಮುಗಿದ ನಂತರ ಸಮಿತಿಯ ಮುಂದೆ ತಮ್ಮ ಸಾಧನೆಯ ಬಗ್ಗೆ ಪ್ರಮಾಣ ಪತ್ರಕ್ಕೆ ಅಭ್ಯರ್ಥಿಯು ಸಹಿ ಹಾಕಲೇಬೇಕು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳು ಅನರ್ಹತೆಗೊಳಗಾಗುವರು.

3) ಅಗ್ನಿಶಾಮಕ ಚಾಲಕ ಮತ್ತು ಚಾಲಕ ತಂತ್ರಜ್ಞ ಹುದ್ದೆಗೆ ಮೇಲೆ ನಿಗಧಿಪಡಿಸಿರುವ 5 ದೈಹಿಕ ಪರೀಕ್ಷೆಗಳ ಪೈಕಿ ಕನಿಷ್ಠ 3 ದೈಹಿಕ ಪರೀಕ್ಷೆಗಳಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳು ಮಾತ್ರ ವಿವಿಧ ವಾಹನ ಚಾಲನಾ ಪರೀಕ್ಷೆಗೆ ಹಾಜರಾಗಲು ಅರ್ಹತೆ ಹೊಂದುತ್ತಾರೆ.

4) ಅಭ್ಯರ್ಥಿಗಳು ಯಾವುದೇ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಗೈರು ಹಾಜರಾದಲ್ಲಿ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

**ಭಾರೀ ವಾಹನ ಚಾಲನಾ ಪರೀಕ್ಷೆ:**

ಅಗ್ನಿಶಾಮಕ ಚಾಲಕ ಮತ್ತು ಚಾಲಕ ತಂತ್ರಜ್ಞ ಹುದ್ದೆಯ ನೇಮಕಾತಿ ಸಮಿತಿಯು ವಿವಿಧ ವಾಹನ ಚಾಲನಾ ಪರೀಕ್ಷೆಯನ್ನು ನಡೆಸಬೇಕಿದ್ದು, ನೇಮಕಾತಿ ಪ್ರಾಧಿಕಾರದ ಸಹಮತಿಯೊಂದಿಗೆ ವಿವಿಧ ಚಾಲನಾ ಪರೀಕ್ಷೆಯ ರೂಪು-ರೇಷೆಗಳನ್ನು ತೀರ್ಮಾನಿಸಲಾಗುವುದು. ಚಾಲನಾ ಪರೀಕ್ಷೆಗೆ 100 ಅಂಕಗಳನ್ನು ನಿಗಧಿಪಡಿಸಲಾಗಿದೆ. ಚಾಲನಾ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಮೆರಿಟ್ ಪಟ್ಟಿಯನ್ನು ತಯಾರಿಸುವಾಗ ಪರಿಗಣಿಸಲಾಗುವುದು.

**15) ಅಗ್ನಿಶಾಮಕ, ಅಗ್ನಿಶಾಮಕ ಚಾಲಕ ಹಾಗೂ ಚಾಲಕ ತಂತ್ರಜ್ಞ ಹುದ್ದೆಗೆ ನಿಗಧಿಪಡಿಸಿದ ಎತ್ತರವೆಷ್ಟು?.**

**ಉ:** ಎಲ್ಲಾ ಅಭ್ಯರ್ಥಿಗಳಿಗೆ ಕನಿಷ್ಟ 168 ಸೆಂ.ಮೀಟರ್ ಎತ್ತರವನ್ನು ನಿಗಧಿಪಡಿಸಲಾಗಿದೆ.

**16) ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಯಾರು ನಡೆಸುತ್ತಾರೆ?.**

**ಉ:** ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯನ್ನು ಡಿ.ಜಿ.ಪಿ.ರವರಿಂದ ನಾಮನಿರ್ದೇಶಿಸಿ ರಚಿಸಲ್ಪಟ್ಟ ಒಂದು ಸಮಿತಿ ನಡೆಸುತ್ತದೆ.

**17) ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಮೇಲ್ಮನವಿ ಸಲ್ಲಿಸಲು ಅವಕಾಶವಿದೆಯೇ?.**

**ಉ:** ಇಲ್ಲ, ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಅಭ್ಯರ್ಥಿಗಳು ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ನೇಮಕಾತಿ ಸಮಿತಿಯು ನಡೆಸುವ ಪರೀಕ್ಷೆಯೇ ಅಂತಿಮವಾಗಿದ್ದು, ಇತರೆ ವೈದ್ಯಾಧಿಕಾರಿಗಳು ನೀಡುವ ಪ್ರಮಾಣ ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

**18) ವೈದ್ಯಕೀಯ ಪರೀಕೆಯಲ್ಲಿ ಅನುತ್ತೀರ್ನರಾದರೆ ಇತರೆ ವೈದ್ಯರಿಂದ ಪ್ರಮಾಣ ಪತ್ರ ಪಡೆದು ನೀಡಬಹುದೇ?.**

**ಉ:** ಇಲ್ಲ ಇತರೆ ಯಾವುದೇ ವೈದ್ಯರಿಂದ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಾತಿ ಸಮಿತಿಯಿಂದ ನಿರ್ದೇಶಿಸಲ್ಪಟ್ಟ ಅಧಿಕಾರಿಗಳು ತಪಾಸಣೆಯ ನಂತರ ನೀಡಲಾಗುವ ಪ್ರಮಾಣ ಪತ್ರವನ್ನು ಮಾತ್ರ ಪರಿಗಣಿಸಲಾಗುವುದು ಹಾಗೂ ವೈದ್ಯಕೀಯ ಮಂಡಳಿಯ ಮುಂದೆ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗುತ್ತಿದ್ದು, ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವೇ ಅಂತಿಮವಾಗಿರುತ್ತದೆ.

19) **BMI ಎಂದರೇನು?.**

ಉ: **BMI** ಎಂದರೆ **Body Mass Machine** ಎಂದು. ಇದರಿಂದ ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು ಅಳತೆ ಮಾಡಲಾಗುವುದು.

20) **ಇಲಾಖೆಯು ನಡೆಸುವ ಪರಿಕ್ಷೆಗಳಿಗೆ ಹಾಜರಾದಲ್ಲಿ ಪರೀಕ್ಷಾ ಭತ್ಯೆ ನೀಡಲಾಗುತ್ತದೆಯೇ?.**

ಉ: ಇಲ್ಲ, ಇಲಾಖೆಯು ನಡೆಸುವ ದೈಹಿಕ ಸಾಮರ್ಥ್ಯ & ದೇಹದಾರ್ಢ್ಯತೆ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆಗಳಿಗೆ ಯಾವುದೇ ರೀತಿಯ ಪರೀಕ್ಷಾ ಭತ್ಯೆಯನ್ನು ನೀಡಲಾಗುವುದಿಲ್ಲ.

21) **ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಹೇಗೆ ತಯಾರಿಸಲಾಗುತ್ತದೆ?.**

ಉ: **ಅಗ್ನಿಶಾಮಕ ಹುದ್ದೆಗೆ:-** ಅಗ್ನಿಶಾಮಕ ಹುದ್ದೆಯ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮತ್ತು ದೈಹಿಕ ಸಾಮರ್ಥ್ಯ ಪರಿಕ್ಷೆಯಲ್ಲಿ ಪಡೆದ ಅಂಕಗಳನ್ನು ಕ್ರೋಢೀಕರಿಸಿ ಶೇಕಡಾವಾರು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿಯಿರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು 1:1 ರ ಅನುಪಾತ ಪ್ರಮಾಣದಲ್ಲಿ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ / ನಿಯಮಾನುಸಾರ ತಯಾರಿಸಲಾಗುವುದು.

**ಅಗ್ನಿಶಾಮಕ ಚಾಲಕ ಹಾಗೂ ಚಾಲಕ ತಂತ್ರಜ್ಞ ಹುದ್ದೆಗೆ:-** ಈ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಹಾಗೂ ಭಾರೀ ವಾಹನ ಚಾಲನಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಕ್ರೋಢೀಕರಿಸಿ ಶೇಕಡಾವಾರು ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿಯಿರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು 1:1 ರ ಅನುಪಾತ ಪ್ರಮಾಣದಲ್ಲಿ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ / ನಿಯಮಾನುಸಾರ ತಯಾರಿಸಲಾಗುವುದು. ITI ನಲ್ಲಿ ಗಳಿಸಿದ ಅಂಕಗಳನ್ನು ನೇಮಕಾತಿಯ ಅರ್ಹತೆಗೆ ಪರಿಗಣಿಸುವುದಿಲ್ಲ. ಆದರೆ ITI ಅನ್ನು ಶೈಕ್ಷಣಿಕ ಅರ್ಹತೆಯನ್ನಾಗಿ ಮಾತ್ರ ಪರಿಗಣಿಸಲಾಗುತ್ತದೆ.

**22) ವೈದ್ಯಕೀಯ ಪರೀಕ್ಷೆ ಎಂದರೇನು?. ಇದರಲ್ಲಿ ಯಾವ ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲಾಗುತ್ತದೆ?.**

ಉ: ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ಸಮಿತಿಯು ರಚಿಸಿದ ಒಂದು ವೈದ್ಯಕೀಯ ಮಂಡಳಿಯ ಮುಂದೆ ಹಾಜರುಪಡಿಸಿ ವ್ಯದ್ಯಕೀಯ ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಇದರಲ್ಲಿ ಕಣ್ಣಿನ ಪರೀಕ್ಷೆ ಶ್ರವಣ ಶಕ್ತಿ, ಅಪಧಮನಿ ಊತ, ಮಾತಿನಲ್ಲಿ ಅಡಚಣೆ ಮತ್ತು ಕ್ಷ-ಕಿರಣದ ಪರಿಕ್ಷೆಗಳನ್ನು ನಡೆಸಲಾಗುತ್ತದೆ. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆ ನೋಡುವುದು).

**23) ಮೂಲ ದಾಖಲೆ ಎಂದರೇನು?.**

ಉ: ಮೂಲ ದಾಖಲೆ ಎಂದರೆ ಯಾವ ಹುದ್ದೆಗೆ ಸೇರಲು ಬಯಸುತ್ತಾರೋ ಆ ಹುದ್ದೆಗೆ ನಿಗಧಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಹುಟ್ಟಿದ ದಿನಾಂಕದ ದಾಖಲೆ ಹಾಗೂ ಮೀಸಲಾತಿಗಳನ್ನು ಕೋರಿದ್ದಲ್ಲಿ ಅಂತಹ ಪ್ರಮಾಣ ಪತ್ರದ ಮೂಲ ಪ್ರತಿಗಳು.

**24) ಮೂಲ ದಾಖಲೆಗಳನ್ನು ಯಾವಾಗ ಹಾಜರುಪಡಿಸಬೇಕು?.**

ಉ: ನೇಮಕಾತಿ ಪ್ರಾಧಿಕಾರವು ಯಾವ ಹಂತದಲ್ಲಿಯಾದರೂ ಹಾಜರುಪಡಿಸಲು ಸೂಚಿಸಬಹುದು. ಅಭ್ಯರ್ಥಿಯು ಅರ್ಜಿಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ:20.07.2020ರ ಒಳಗೆ ಸಿಂಧುವಾಗಿರುವಂತೆ ಮೂಲ ದಾಖಲೆಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ಹಾಜರುಪಡಿಸತಕ್ಕದ್ದು.

**25) ಮೂಲ ತರಬೇತಿ ಎಷ್ಟು ತಿಂಗಳಿರುತ್ತದೆ.?.**

ಉ: **ಅಗ್ನಿಶಾಮಕ ಹುದ್ದೆಗೆ:** ನೇಮಕಾತಿ ಹೊಂದಿದ ಅಭ್ಯರ್ಥಿಗಳು ಇಲಾಖೆಯು ತೀರ್ಮಾನಿಸಿದ ತರಬೇತಿ ಕೇಂದ್ರಗಳಲ್ಲಿ 06 ತಿಂಗಳು ತರಬೇತಿಯನ್ನು ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗಧಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

**ಅಗ್ನಿಶಾಮಕ ಚಾಲಕ ಮತ್ತು ಚಾಲಕ ತಂತ್ರಜ್ಞ ಹುದ್ದೆಗಳಿಗೆ:-** ನೇಮಕಾತಿ ಹೊಂದಿದ ಅಭ್ಯರ್ಥಿಗಳು ಇಲಾಖೆಯು ತೀರ್ಮಾನಿಸಿದ ತರಬೇತಿ ಕೇಂದ್ರಗಳಲ್ಲಿ 04 ತಿಂಗಳು ತರಬೇತಿಯನ್ನು ಹಾಗೂ 03 ತಿಂಗಳ ತರಬೇತಿಯನ್ನು ಅಗ್ನಿಶಾಮಕ ಕಾರ್ಯಾಗಾರದಲ್ಲಿ ಪಡೆಯಬೇಕಾಗಿದ್ದು, ತರಬೇತಿಯ ಕೊನೆಯಲ್ಲಿ ನಿಗಧಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕು. (ಹೆಚ್ಚಿನ ಮಾಹಿತಿಗಾಗಿ ನೇಮಕಾತಿ ಅಧಿಸೂಚನೆಯನ್ನು ನೋಡುವುದು).

**26) ಪ್ರಮಾಣ ಪತ್ರದ ಫಾರಂ ಅನ್ನು ಹಾಜರುಪಡಿಸಬೇಕೇ?**

**ಉ:** ಜಾತಿ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಸಹಿ ಮತ್ತು ಮೇಲು ರುಜು ಮಾಡಿಸಿ ಮತ್ತು ಮೊಹರಿನೊಂದಿಗೆ ಈ ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಮಾಡಿಸಿರಬೇಕು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ : **ನಮೂನೆ–ಡಿ.**

ಬಿ) ಪ್ರವರ್ಗ–1 : **ನಮೂನೆ–ಇ.**

ಸಿ) ಪ್ರವರ್ಗ–2ಎ, 2ಬಿ, 3ಎ, 3ಬಿ, : **ನಮೂನೆ –ಎಫ್.**

ಇವುಗಳ ನಮೂನೆಯನ್ನು ಅಧಿಸೂಚನೆಯಲ್ಲಿ ಮಾಹಿತಿಗಾಗಿ ನೀಡಲಾಗಿದೆ.

27) **ನೇಮಕಾತಿಯಲ್ಲಿ ವಿವಿಧ ಜಾತಿ ಮತ್ತು ವರ್ಗಗಳಿಗೆ ಎಷ್ಟು ಮೀಸಲಾತಿಯನ್ನು ನೀಡಲಾಗುತ್ತದೆ?.**

**ಉ:**

| | |
|---|---|
| ಸಾಮಾನ್ಯ ವರ್ಗ | –50% |
| ಪರಿಶಿಷ್ಟ ಜಾತಿ | –15% |
| ಪರಿಶಿಷ್ಟ ಪಂಗಡ | –03% |
| ಪ್ರವರ್ಗ–1 | –04% |
| ಪ್ರವರ್ಗ–2ಎ | –15% |
| ಪ್ರವರ್ಗ–2ಬಿ | –04% |
| ಪ್ರವರ್ಗ–3ಎ | –04% |
| ಪ್ರವರ್ಗ–3ಬಿ | –05% |

(ಸರ್ಕಾರದ ಆದೇಶ ಸಂಖ್ಯೆ ಸಿಆಸುಇ/08/ಸೆಹಿಮ/95, ದಿನಾಂಕ:20–06–1995 ರಲ್ಲಿರುವಂತೆ)

28) **ಗ್ರಾಮೀಣ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?.**

**ಉ:** 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಗ್ರಾಮೀಣ ಅಭ್ಯರ್ಥಿ ಎನ್ನುತ್ತಾರೆ. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗೂ ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಈ ಮಿಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

29) **ಕನ್ನಡ ಮಾಧ್ಯಮ ಅಭ್ಯರ್ಥಿ ಎಂದರೇನು ? ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?.**

ಉ: 1ನೇ ತರಗತಿಯಿಂದ 10ನೇ ತರಗತಿಯವರೆಗೆ ನಿರಂತರವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಅಭ್ಯರ್ಥಿಗಳಿಗೆ ಕನ್ನಡ ಮಾಧ್ಯಮ ಅಭ್ಯರ್ಥಿ ಎನ್ನುತ್ತಾರೆ. ಕನ್ನಡ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು ಹಾಗೂ ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದ ಒಳಗೆ ಈ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

30) **ಮಾಜಿ ಸೈನಿಕ ಅಭ್ಯರ್ಥಿ ಎಂದರೇನು?.**

ಉ: ಭೂಸೇನೆ, ವಾಯು ಸೇನೆ, ನೌಕಾ ಸೇನೆಯಲ್ಲಿ ಸೇವೆ ಸಲ್ಲಿಸಿ ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದುಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿರುವ ಯೋಧರನ್ನು ಮಾಜಿ ಸೈನಿಕ ಅಭ್ಯರ್ಥಿ ಎನ್ನುತ್ತಾರೆ.

31) **ಯೋಜನಾ ನಿರಾಶ್ರಿತ ಅಭ್ಯರ್ಥಿ ಎಂದರೇನು ?. ಪ್ರಮಾಣ ಪತ್ರವನ್ನು ಯಾರಿಂದ ಮತ್ತು ಎಂದು ಪಡೆದಿರಬೇಕು?.**

ಉ: ಸರ್ಕಾರದ ಯೋಜನೆಗಳಿಂದ ತಾವು ಅವಲಂಬಿತರಾಗಿದ್ದ ಕೃಷಿ ಭೂಮಿ, ಮನೆಗಳನ್ನು ಕಳೆದುಕೊಂಡ ಅಭ್ಯರ್ಥಿಗಳನ್ನು ಯೋಜನಾ ನಿರಾಶ್ರಿತ ಅಭ್ಯರ್ಥಿ ಎನ್ನುತ್ತಾರೆ. ಪ್ರಮಾಣ ಪತ್ರವನ್ನು ನಿಗಧಿಪಡಿಸಿರುವ ನಮೂನೆಯಲ್ಲಿ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

32) **ಗ್ರಾಮೀಣ ಅಭ್ಯರ್ಥಿಗಳಿಗೆ ಶೇಕಡಾ ಎಷ್ಟು ಮೀಸಲಾತಿ ನೀಡಲಾಗಿದೆ?.**

**ಉ:** ಗ್ರಾಮೀಣ ಅಭ್ಯರ್ಥಿಗಳಿಗೆ 25% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸನೇನಿ/2007, ದಿನಾಂಕ:04–01–2008ರ ಪ್ರಕಾರ)

33) **ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಶೇಕಡಾ ಎಷ್ಟು ಮೀಸಲಾತಿ ನೀಡಲಾಗಿದೆ?.**

**ಉ:** ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ 05% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸನೇನಿ/2007, ದಿನಾಂಕ:04–01–2008ರ ಪ್ರಕಾರ).

34) **ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ ಶೇಕಡಾ ಎಷ್ಟು ಮೀಸಲಾತಿ ನೀಡಲಾಗಿದೆ?.**

**ಉ:** ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿಗಳಿಗೆ 05% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸನೇನಿ/2007, ದಿನಾಂಕ:04–01–2008ರ ಪ್ರಕಾರ).

35) **ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಶೇಕಡಾ ಎಷ್ಟು ಮೀಸಲಾತಿ ನೀಡಲಾಗಿದೆ?.**

**ಉ:** ಮಾಜಿ ಸೈನಿಕ ಅಭ್ಯರ್ಥಿಗಳಿಗೆ 10% ಮೀಸಲಾತಿ ನೀಡಲಾಗಿದೆ. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸನೇನಿ/2007, ದಿನಾಂಕ:04–01–2008ರ ಪ್ರಕಾರ).

36) **ಮಾಜಿ ಸೈನಿಕ ಅಭ್ಯರ್ಥಿಗಳು ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗುತ್ತದೆ.**
**ಉ:** ಮಾಜಿ ಸೈನಿಕ ಅಭ್ಯರ್ಥಿಗಳು ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರದ ಜೊತೆಗೆ ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ / ನಿರಾಕ್ಷೇಪಣಾ ಪ್ರಮಾಣ ಪತ್ರ ಮತ್ತು ಜಾತಿ ಮೀಸಲಾತಿ ಕೋರಿದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕಾಗುತ್ತದೆ.

37) **ಸೈನಿಕ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಬೇಕಾಗಿರುವ ವಿದ್ಯಾರ್ಹತೆ** ?.
**ಉ:** ಮಾಜಿ ಸೈನಿಕರು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ:20.07.2020ಕ್ಕೆ ಹೊಂದಿರಬೇಕು (ಮಾಜಿ ಸೈನಿಕ ಅಭ್ಯರ್ಥಿಗಳು ದಿನಾಂಕ:20.07.2020ರ ಒಳಗೆ ವಿದ್ಯಾರ್ಹತೆಯ ಪ್ರಮಾಣ ಪತ್ರವನ್ನು ಹೊಂದಿರುವ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು).

38) **ಮಾಜಿ ಸೈನಿಕ ಮೀಸಲಾತಿ ಪಡೆಯಲು ಸೈನ್ಯದಿಂದ ವಿಯೋಜನೆ ಹೊಂದುವಾಗ ನೀಡುವ ಗ್ರಾಜ್ಯುಯೇಟ್ ಪ್ರಮಾಣ ಪತ್ರ ಹೊಂದಿದ್ದರೆ ಅರ್ಜಿ ಸಲ್ಲಿಸಬಹುದೇ?.**
**ಉ:** ಮಾಜಿ ಸೈನಿಕರು ಎಸ್.ಎಸ್.ಎಲ್.ಸಿ ಉತ್ತೀರ್ಣ ಹೊಂದಿ, ಸೈನಿಕನಾಗಿ ಭರ್ತಿಹೊಂದಿ, ತದನಂತರ ಸೈನ್ಯದಿಂದ ವಿಯೋಜನೆ ಹೊಂದುವಾಗ, ಸೈನ್ಯದಿಂದ ಮಾಜಿ ಸೈನಿಕನಿಗೆ ನೀಡುವ ಗ್ರಾಜ್ಯುಯೇಷನ್ ಸರ್ಟಿಫಿಕೇಟ್ ಹೊಂದಿರುವ ಮಾಜಿ ಸೈನಿಕ ಅಭ್ಯರ್ಥಿಗಳು ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

39) **ಮಾಜಿ ಸೈನಿಕ ಅಭ್ಯರ್ಥಿಗಳು ಒಮ್ಮೆ ಸರ್ಕಾರಿ ನೌಕರಿಗೆ ಮಾಜಿ ಸೈನಿಕ ಮೀಸಲಾತಿಯನ್ನು ಕೋರಿ ಆಯ್ಕೆಯಾದಲ್ಲಿ, ಮತ್ತೊಮ್ಮೆ ಮಾಜಿ ಸೈನಿಕ ಮೀಸಲಾತಿಯನ್ನು ಪಡೆಯಬಹುದೇ?.**
**ಉ:** ಇಲ್ಲ ಮಾಜಿ ಸೈನಿಕರು ಅವರಿಗೆ ನೀಡಿರುವ ಪ್ರಯೋಜನವಾದ ಪುನರ್ ನೇಮಕವನ್ನು ಉಪಯೋಗಿಸಿಕೊಂಡು ಒಂದು ಬಾರಿ ಸರ್ಕಾರಿ ಹುದ್ದೆಗೆ ಆಯ್ಕೆಯಾದಲ್ಲಿ ಅಂತಹ ಮಾಜಿ ಸೈನಿಕ ಸ್ಥಾನವು ಸರ್ಕಾರಿ ಉದ್ಯೋಗದ ಪುನರ್ ನೇಮಕಕ್ಕೆ ರದ್ದಾಗುತ್ತದೆ.

40) **ಮಾಜಿ ಸೈನಿಕ ಅಭ್ಯರ್ಥಿಗಳು ಯಾವಾಗ ಅರ್ಜಿಯನ್ನು ಸಲ್ಲಿಸಬಹುದಾಗಿದೆ?.**
**ಉ:** ಸೈನ್ಯದಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದು, ಅಂತಹ ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

41) **ಮಾಜಿ ಸೈನಿಕರ ಮಕ್ಕಳೂ ಸಹ ಮಾಜಿ ಸೈನಿಕ ಮೀಸಲಾತಿ ಕೋರಿ ಅರ್ಜಿಯನ್ನು ಸಲ್ಲಿಸಬಹುದೇ?.**
**ಉ:** ಸೇನೆಯಲ್ಲಿ ಸೇವೆ ನಿರ್ವಹಿಸುವಾಗ ಮರಣ ಹೊಂದಿದ ಸೈನಿಕರ ಅಥವಾ ಶಾಶ್ವತ ವಿಕಲತೆ ಹೊಂದಿದ ಮಾಜಿ ಸೈನಿಕರ ಮಕ್ಕಳು ಮೀಸಲಾತಿಯನ್ನು ಕೋರಿ ಅರ್ಜಿ ಸಲ್ಲಿಸಬಹುದಾಗಿದೆ.

42) **ಮಾಜಿ ಸೈನಿಕ ಮಕ್ಕಳಿಗೆ ಶೇಕಡ ಮೀಸಲಾತಿ ಎಷ್ಟು ಪರಿಗಣಿಸಲಾಗುವುದು?.**
**ಉ:** ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿರುವ ಶೇಕಡ 10 ರೊಳಗೆ ಮಾಜಿ ಸೈನಿಕ ಮಕ್ಕಳನ್ನು ಸಹ ಪರಿಗಣಿಸಲಾಗುವುದು. (ಸರ್ಕಾರದ ಆದೇಶ ಸಂಖ್ಯೆ. ಸಿಆಸುಇ/53/ಸನೇನಿ/2007, ದಿನಾಂಕ:04-01-2008ರ ಪ್ರಕಾರ).

43) **ಮಾಜಿ ಸೈನಿಕರ ಮಕ್ಕಳಿಗೆ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ವಿನಾಯಿತಿ ನೀಡಲಾಗಿದೆಯೇ?.**
**ಉ:** ಮಾಜಿ ಸೈನಿಕರ ಮಕ್ಕಳಿಗೆ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ವಿನಾಯಿತಿ ಇರುವುದಿಲ್ಲ ಮತ್ತು ಸಾಮಾನ್ಯ ಅಭ್ಯರ್ಥಿಗಳಿಗೆ ಇರುವ ಅರ್ಹತೆಯ ಮಟ್ಟವನ್ನು ಪೂರ್ಣಗೊಳಿಸಬೇಕಾಗುತ್ತದೆ.

44) **ಅಭ್ಯರ್ಥಿಗಳಿಗೆ ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಕರೆ ಪತ್ರಗಳನ್ನು ಅಂಚೆ ಮುಖಾಂತರ ಕಳುಹಿಸಲಾಗುವುದೇ?.**
**ಉ:** ಅಗ್ನಿಶಾಮಕ, ಅಗ್ನಿಶಾಮಕ ಚಾಲಕ ಹಾಗೂ ಚಾಲಕ ತಂತ್ರಜ್ಞ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಹ ಅಭ್ಯರ್ಥಿಗಳಿಗೆ ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಮತ್ತು ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ಅಂಚೆಯ ಮುಖಾಂತರ ಕಳುಹಿಸಲಾಗುವುದಿಲ್ಲ. ಪರೀಕ್ಷೆಯ ಕರೆ ಪತ್ರಗಳು ಆನ್‌ಲೈನ್‌ನಲ್ಲಿ ಲಭ್ಯವಿದ್ದು, ಅಭ್ಯರ್ಥಿ ಸ್ವತಃ ಆನ್-ಲೈನ್‌ನಿಂದ ಕರೆ ಪತ್ರಗಳನ್ನು ಡೌನ್‌ಲೋಡ್ ಮಾಡಿ ಮುದ್ರಿಸಿಕೊಂಡು ಪರೀಕ್ಷೆಗೆ ಕರೆ ಪತ್ರದೊಂದಿಗೆ ಹಾಜರಾಗತಕ್ಕದ್ದು.

45) **ಕರೆ ಪತ್ರಗಳನ್ನು ತರದೇ ಪರೀಕ್ಷೆಗೆ ಹಾಜರಾಗಬಹುದೇ?.**
**ಉ:** ಆನ್-ಲೈನ್‌ನಲ್ಲಿ ಲಭ್ಯವಿರುವ ಕರೆ ಪತ್ರಗಳನ್ನು ತರದೇ ಇರುವ ಯಾವುದೇ ಅಭ್ಯರ್ಥಿಯನ್ನು ಪರೀಕ್ಷೆಗೆ ಹಾಜರಾಗಲು ಪರಿಗಣಿಸಲಾಗುವುದಿಲ್ಲ. ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಮುದ್ರಿತ ಅರ್ಜಿ ಪ್ರತಿಯೊಂದಿಗೆ ಬ್ಯಾಂಕ್‌ಗೆ ಶುಲ್ಕ ಪಾವತಿಸಿದ ಮೂಲ ಚಲನ್‌ನ ಪ್ರತಿಯನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

46) **ಎಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುತ್ತದೆ?.**
**ಉ:** ತಪ್ಪು ಮಾಹಿತಿಯನ್ನು ಆನ್-ಲೈನ್‌ನಲ್ಲಿ ತುಂಬಿ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಪರೀಕ್ಷೆಯ ಮುಂಚಿತವಾಗಿ ಮತ್ತು ಪರೀಕ್ಷೆಯ ನಂತರ ಕಂಡು ಬಂದಲ್ಲಿ ಕಾನೂನು ರೀತಿಯ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದು.

47) **ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ವೆಬ್-ಸೈಟ್ ಯಾವುದು?.**

**ಉ:** ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಹಾಗೂ ಮಾಹಿತಿಯನ್ನು ತಿಳಿದುಕೊಳ್ಳಲು www.ksp.gov.in ನ್ನು ನೋಡುವುದು.

48) **ಅಗ್ನಿಶಾಮಕ, ಅಗ್ನಿಶಾಮಕ ಚಾಲಕ ಹಾಗೂ ಚಾಲಕ ತಂತ್ರಜ್ಞ ಹುದ್ದೆಗೆ ವೇತನ ಶ್ರೇಣಿ ಎಷ್ಟು?.**

**ಅಗ್ನಿಶಾಮಕರಿಗೆ ; `. 23500-550-24600-600-27000-650-29600-750-32600-850-36000-950-39800-1100-46400-1250-47650**

**ಅಗ್ನಿಶಾಮಕ ಚಾಲಕರಿಗೆ ; `.27650-650-29600-750-32600-850-36000-950-39800-1100-46400-1250-52650**

**ಚಾಲಕ ತಂತ್ರಜ್ಞರಿಗೆ ; `.27650-650-29600-750-32600-850-36000-950-39800-1100-46400-1250-52650**

49) **ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾದಾಗ ಯಾವ ಗುರುತಿನ ಚೀಟಿಯನ್ನು ಹಾಜರು ಪಡಿಸಬೇಕಾಗುತ್ತದೆ?.**

**ಉ:** ಈ ಕೆಳಗಿನ ಯಾವುದಾದರೊಂದು ಭಾವಚಿತ್ರವುಳ್ಳ ಗುರುತಿನ ಚೀಟಿಯನ್ನು ಹಾಜರುಪಡಿಸಬೇಕು.

1) ಪಾಸ್‌ಪೋರ್ಟ್ (Passport)
2) ಚಾಲನಾ ಪರವಾನಗಿ ಪತ್ರ (Driving License)
3) ಪ್ಯಾನ್ ಕಾರ್ಡ್ (PAN Card)
4) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
5) ಸಾರ್ವಜನಿಕ ಬ್ಯಾಂಕುಗಳು/ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
6) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
7) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
8) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)
9) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
10) ಎಲೆಕ್ಟ್ರೋಲ್ ಫೋಟೋ ಗುರುತಿನ ಚೀಟಿ (EPIC).
11) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್. (AADHAR CARD).

50) **ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷಾ ಸಮಯದಲ್ಲಿ ಅಭ್ಯರ್ಥಿಗೆ ಶಾರೀರಿಕವಾಗಿ ಅನಾಹುತ ಸಂಭವಿಸಿದ ಪಕ್ಷದಲ್ಲಿ ನೇಮಕಾತಿ ಸಮಿತಿಯು ಹೊಣೆಯಾಗುವುದೇ?.**

**ಉ:** ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ/ ತೊಂದರೆಗಳಿಗೆ ಅಗ್ನಿಶಾಮಕ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಯಂ ಹಿತದೃಷ್ಟಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದ ಸದೃಢವಾಗಿದೆ ಎಂದು ಖಚಿತಪಡಿಸಿಕೊಂಡು ಇಲಾಖೆಯು ನಡೆಸುವ ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಎಲ್ಲ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ಸ್ವಯಂ ದೃಢಪಡಿಸಿಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಠ ಒಂದು ತಿಂಗಳು ಮುಂಚಿತವಾಗಿ ಅಭ್ಯರ್ಥಿಗಳು ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆಗೆ ಸಾಕಷ್ಟು ಅಭ್ಯಾಸ/ತಯಾರಿ ಮಾಡಿಕೊಳ್ಳತಕ್ಕದ್ದು.

51) **ಶುಲ್ಕವನ್ನು ಯಾವ ವಿಧಾನದಲ್ಲಿ ಪಾವತಿಸಬೇಕು?**

**ಉ:** ಶುಲ್ಕವನ್ನು ನಗದು ರೂಪದಲ್ಲಿ ಹೆಚ್.ಡಿ.ಎಫ್.ಸಿ ಬ್ಯಾಂಕ್/ ಅಂಚೆ ಕಛೇರಿಯಲ್ಲಿ ಮಾತ್ರ ಪಾವತಿಸತಕ್ಕದ್ದು. ಡಿ.ಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇತ್ಯಾದಿಗಳನ್ನು ಸ್ವೀಕರಿಸಲಾಗುವುದಿಲ್ಲ.

52) **ವಿಳಾಸ ಬದಲಾವಣೆಯಾದಲ್ಲಿ ಅದನ್ನು ಬದಲಾಯಿಸಬಹುದೇ?.**

**ಉ:** ಇದಕ್ಕೆ ಇದಕ್ಕೆ ಸಂಬಂಧಿಸಿದಂತೆ ಮಾಹಿತಿ ಸೂಚಿಯನ್ನು ನೋಡುವುದು.

53) **ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಯಾವ ಪ್ರಮಾಣ ಪತ್ರವನ್ನು ಸಲ್ಲಿಸಬೇಕು?.**

**ಉ:** ಅಭ್ಯರ್ಥಿಯು ಅರ್ಜಿ ತುಂಬುವ/ ಸಲ್ಲಿಸುವ ಸಮಯದಲ್ಲಿ ಯಾವುದೇ ಕೇಂದ್ರ / ರಾಜ್ಯ ಸರ್ಕಾರದ ಅಥವಾ ಸರ್ಕಾರದ ಯಾವುದೇ ಪ್ರಾಧಿಕಾರ ಅಥವಾ ಕೇಂದ್ರ ಅಥವಾ ರಾಜ್ಯ ಸಾರ್ವಜನಿಕ ಸ್ವಾಮ್ಯಗಳ ನೌಕರಿಯಲ್ಲಿದ್ದಲ್ಲಿ ಅಂತಹವರು ಇಲಾಖಾ ಮುಖ್ಯಸ್ಥರ ಅಥವಾ ನೇಮಕಾತಿ ಪ್ರಾಧಿಕಾರದಿಂದ ಸೂಕ್ತ ದೃಢೀಕರಣದ ಸಹಿಯೊಂದಿಗೆ ಸಮುಚಿತ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸಬೇಕು ಹಾಗೂ ಅಗ್ನಿಶಾಮಕ ಇಲಾಖೆಯಲ್ಲಿ ನೇಮಕಗೊಂಡಲ್ಲಿ ಅಗ್ನಿಶಾಮಕ ಸೇವೆಗೆ ಕರ್ತವ್ಯದಿಂದ ಬಿಡುಗಡೆ ಮಾಡಲು ಅನುಮತಿ ಪತ್ರ / ನಿರಾಕ್ಷೇಪಣ ಪತ್ರವನ್ನು (No Objection Certificate) ಪಡೆದಿಟ್ಟುಕೊಂಡಿದ್ದು, ನೇಮಕಾತಿ ಸಮಿತಿಯು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.

54) **ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾಗುತ್ತದೆ?.**

**ಉ:** ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಯಾವುದೇ ಮೂಲ ಪತ್ರಗಳನ್ನು ಸಲ್ಲಿಸಬೇಕಾಗಿರುವುದಿಲ್ಲ. ಆದರೆ, ಪ್ರಮಾಣ ಪತ್ರದ ಮಾಹಿತಿ ಮತ್ತು ಪ್ರಮಾಣ ಪತ್ರ ಪಡೆದ ದಿನಾಂಕ ನಮೂದಿಸಬೇಕಾಗುತ್ತದೆ. ತದನಂತರ ಅರ್ಹ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲ ಮಾಹಿತಿಗಳಿಗೆ ಪೂರಕವಾಗಿ ಅಯಾಯ ದಾಖಲೆ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸಬೇಕು ಹಾಗೂ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ತಪ್ಪಿದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಒಂದು ವೇಳೆ, ಸಲ್ಲಿಸಿದ ಪ್ರಮಾಣ ಪತ್ರಗಳು ಕಳೆದು ಹೋದರೆ ನೇಮಕಾತಿ ಸಮಿತಿಯು ಜವಾಬ್ದಾರರಾಗುವುದಿಲ್ಲ.

55) **ಅಭ್ಯರ್ಥಿಗಳು ನೇಮಕಾತಿಯ ಯಾವುದೇ ನಿಯಮಗಳನ್ನು ಪ್ರಶ್ನಿಸಬಹುದೇ?.**

**ಉ:** ಅಭ್ಯರ್ಥಿಯು ಒಂದು ಹುದ್ದೆಗೆ ಅರ್ಜಿ ಸಲ್ಲಿಸಿದ ತತ್‌ಕ್ಷಣ ತಾನು ನಿಯಮ ಮತ್ತು ವಿನಿಯಮಗಳಿಗೆ ಬದ್ದನಾಗಿರುತ್ತೇನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ, ತಾನು ಸದರಿ ಹುದ್ದೆಗೆ ಆಯ್ಕೆಯಾಗದಿದ್ದಲ್ಲಿ ನಿಯಮಗಳನ್ನು ಪ್ರಶ್ನಿಸಲಾಗುವುದಿಲ್ಲ.

56) **ಅಭ್ಯರ್ಥಿಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದೇ?.**

**ಉ:** ಅಭ್ಯರ್ಥಿಯು ಅಂತರ್‌ಜಾಲದಲ್ಲಿ ಅರ್ಜಿಯನ್ನು ತುಂಬುವಾಗ ನೀಡಿರುವ ಮಾಹಿತಿಗಳ ಅನ್ವಯ ಸಮರ್ಪಕವಾಗಿ ಭರ್ತಿ ಮಾಡದೇ Junk Character / Unknown language ನಿಂದ ತುಂಬಿದ ಅರ್ಜಿಗಳು ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

**ವಿಶೇಷ ಸೂಚನೆ:-**

1) **ನಿಗದಿಪಡಿಸಿರುವ ನಮೂನೆಯ ಜಾತಿ/ ಪ್ರವರ್ಗ ಪ್ರಮಾಣ ಪತ್ರಗಳು, ಯೋಜನಾ ನಿರಾಶ್ರಿತ ಪ್ರಮಾಣ ಪತ್ರ, ಕನ್ನಡ ಮಾಧ್ಯಮ ಪ್ರಮಾಣ ಪತ್ರ, ಗ್ರಾಮೀಣ ಪ್ರಮಾಣ ಪತ್ರ ಮತ್ತು ಮಾಜಿ ಸೈನಿಕ ವಿಯೋಜನೆ ಪ್ರಮಾಣ ಪತ್ರ(ಪೂರ್ವಾನುಮತಿ)ಗಳನ್ನು ಹಾಗೂ ಕಲ್ಯಾಣ-ಕರ್ನಾಟಕ ಮೀಸಲಾತಿ ಬಯಸುವ ಅಭ್ಯರ್ಥಿಗಳು ಅರ್ಹತಾ ಪ್ರಮಾಣ ಪತ್ರವನ್ನು ಅರ್ಜಿಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳಿಂದ ಪಡೆದಿಟ್ಟುಕೊಳ್ಳತಕ್ಕದ್ದು.**
2) **ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ದೈಹಿಕ ಸಾಮರ್ಥ್ಯ ಮತ್ತು ದೇಹದಾರ್ಢ್ಯತೆ ಪರೀಕ್ಷೆ ಮತ್ತು ವೈದ್ಯಕೀಯ ಪರೀಕ್ಷೆ ನಡೆಯುವುದರ ಬಗ್ಗೆ ಅರ್ಹಗೊಂಡ/ ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ ಮತ್ತು ಅಭ್ಯರ್ಥಿಗಳು ಅಗ್ನಿಶಾಮಕ ಇಲಾಖೆ ಅಧೀಕೃತ ವೆಬ್-ಸೈಟ್‌ನ ಮುಖಾಂತರ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.**
3) **ಇನ್ನೂ ಹೆಚ್ಚಿನ ಮಾಹಿತಿ ಬೇಕಿದ್ದಲ್ಲಿ ನೇಮಕಾತಿ ಕಛೇರಿಯ ಈ ಕೆಳಕಂಡ ಸಹಾಯವಾಣಿಯ ಸಂಖ್ಯೆ ಮತ್ತು ಅರ್ಜಿ ತುಂಬುವ ವಿಧಾನವನ್ನು ಇಲಾಖೆಯ ಅಧಿಕೃತ ವೆಬ್-ಸೈಟ್** www.ksp.gov.in **ನಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.**

**ಸಹಾಯವಾಣಿ ಸಂಖ್ಯೆ: 080-22943346**

**ಸಹಿ/-**
**ಸದಸ್ಯ ಕಾರ್ಯದರ್ಶಿ ಹಾಗೂ ಉಪ ನಿರ್ದೇಶಕರು,**
**ಅಗ್ನಿಶಾಮಕ/ಅಗ್ನಿಶಾಮಕ ಚಾಲಕ/ಚಾಲಕ ತಂತ್ರಜ್ಞರುಗಳ**
**ನೇಮಕಾತಿ ಸಮಿತಿ,**
**ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು,**
**ಬೆಂಗಳೂರು-560 042..**